ದಿಃ 13.08.2026.

**ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ನ್ಯಾಯಾಲಯ ಹೊಳಲ್ಕೆರೆ.**

**ಸಿ.ಸಿ.1018/2020**

**ಪ್ರಾ.ಸಾಃ6**

**ಚಾಸಾಃ4**

| | | |
|---|---|---|
| ಸಾಕ್ಷಿಯ ಹೆಸರು | : | ಶಿವಾನಂದಮೂರ್ತಿ |
| ತಂದೆಯ ಹೆಸರು | : | ಶಿವಲಿಂಗಪ್ಪ |
| ವಯಸ್ಸು | : | 58 ವರ್ಷ |
| ಕೆಲಸ | : | ವ್ಯವಸಾಯ |
| ವಾಸ | : | ರಂಗಾಪುರ ಗ್ರಾಮ |

**ದಿಃ13.08.2026 ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು**

**ಮುಖ್ಯ ವಿಚಾರಣೆ ಎ.ಪಿ.ಪಿ.ಯವರಿಂದಃ**

ನ್ಯಾಯಾಲಯದ ಮುಂದೆ ಇರುವ 1 ನೇ ಆರೋಪಿ ನನ್ನ ಸಂಬಂಧಿಕರು. 1 ನೇ ಆರೋಪಿಯನ್ನು ನೋಡಿದರೆ ಗುರುತಿಸುತ್ತೇನೆ. ಚಾಸಾ-1 ನನ್ನ ಅಕ್ಕ. ಚಾಸಾ-5 ಮತ್ತು 6 ರವರು ಗೊತ್ತು ಅವರು ನನ್ನ ಸಂಬಂಧಿಕರು.

ಸಾಕ್ಷಿಗೆ ನಿಪಿ-3 ನ್ನು ತೋರಿಸಲಾಗಿ, ಸಾಕ್ಷಿ ಸದರಿ ಸಹಿಯನ್ನು ನೋಡಿ ಗುರುತಿಸಿದ್ದು, ಸದರಿ ಸಹಿಯನ್ನು ನಿಪಿ-3(ಡಿ) ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು 2012 ರಲ್ಲಿ ಮಾಡಿರುತ್ತೇನೆ. ಏನು ಬರೆದಿರುತ್ತಾರೆ ಎಂದು ನನಗೆ ತಿಳಿದಿರುವುದಿಲ್ಲ. ಪೊಲೀಸರು ಮಹಜರಿನ ಕ್ರಮಕ್ಕೆ ಬಂದಾಗ ಸಹಿ ಮಾಡಿರುತ್ತೇನೆ. ಮಹಜರಿಗೆ ಸ್ಥಳವನ್ನು ಚಾಸಾ-7 ರವರು ತೋರಿಸಿರುತ್ತಾರೆ. ಸದರಿ ಮಹಜರನ್ನು ಮಧ್ಯಾಹ್ನ 02.30 ಗಂಟೆಗೆ ಮಾಡಿರುತ್ತಾರೆ.

2012 ರಂದು ಆರೋಪಿತರು ಬಂದು ಚಾಸಾ-1 ರವರ ಮೇಲೆ ಬೆಳಿಗ್ಗೆ 11.00 ಗಲಾಟೆ ಮಾಡಿ, ಹೊಡೆದಿರುತ್ತಾರೆ. ಕೆಟ್ಟ ಭಾಷೆಯಿಂದ ಬೈದಿರುತ್ತಾರೆ. ಈ ಗಲಾಟೆಯ ಸಂಬಂಧ ಪೊಲೀಸರ ಮುಂದೆ ಯಾವುದೇ ಹೇಳಿಕೆ ನೀಡಿರುತ್ತೇನೆ.

(ಈ ಹಂತದಲ್ಲಿ ಸಾಕ್ಷಿಯು ಭಾಗಶಃ ಪ್ರತಿಕೂಲ ಸಾಕ್ಷಿ ನುಡಿಯುತ್ತಿದ್ದಾರೆ. ಮಾನ್ಯ ಎ.ಪಿ.ಪಿ.ಯವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ, ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ಅನುಮತಿ ನೀಡಲಾಯಿತು)

**ಪಾಟೀ ಸವಾಲು ಎ.ಪಿ.ಪಿ.ಯವರಿಂದಃ**

ದಿ: 13.08.2026.

ದಿನಾಂಕ 15.02.2012 ರಂದು ಶಿವಲಿಂಗಪ್ಪರವರ ಮನೆಯ ಮುಂದೆ ಪೊಲೀಸರು ಮಹಜರನ್ನು ಜರುಗಿಸಲು ಬಂದಿದ್ದರು ಎಂದರೆ ಸರಿಯಲ್ಲ. ಸದರಿ ಮಹಜರನ್ನು ಬೆಳಿಗ್ಗೆ 10.00 ರಿಂದ 11.00 ಗಂಟೆವರೆಗೆ ಜರುಗಿಸಿರುತ್ತಾರೆ ಎಂದರೆ ಸರಿಯಲ್ಲ. ಸದರಿ ಮಹಜರಿಗೆ ಸ್ಥಳವನ್ನು ನಾನು ತೋರಿಸಿರುತ್ತೇನೆ.

ದಿನಾಂಕ 15.2005 ರಲ್ಲಿ ದಾವಣಗೆರೆ ತಾಲ್ಲೂಕು ಎಲೆಬೆತ್ತೂರು ಗ್ರಾಮದ ಆರೋಪಿ 1 ರವರಿಗೆ ಚಾಸಾ-1 ರವರನ್ನು ಕೊಟ್ಟು ಮದುವೆ ಮಾಡಿರುತ್ತೇನೆ ಎಂದರೆ ಸರಿ. 3-4 ವರ್ಷಗಳ ಕಾಲ ಅನ್ಯೂನ್ಯವಾಗಿ ಸಂಸಾರ ಮಾಡಿರುತ್ತಾರೆ ಎಂದರೆ ಸರಿ. ಚಾಸಾ-1 ರವರಿಗೆ ಮಕ್ಕಳಿಲ್ಲ ಎಂಬ ಕಾರಣಕ್ಕಾಗಿ 1 ನೇ ಆರೋಪಿ ಹಲ್ಲೆ ಮಾಡಿ ಮನೆಯಿಂದ ಹೊರ ಹಾಕಿದ್ದರು ಎಂದರೆ ಸರಿ. ಚಾಸಾ-1 ರವರಿಗೆ 1 ನೇ ಆರೋಪಿ ಮಾನಸಿಕ ಮತ್ತು ದೈಹಿಕ ಹಿಂಸೆ ನೀಡಿರುತ್ತಾರೆ ಎಂದರೆ ಸರಿ. ಗಲಾಟೆ ಸಮಯದಲ್ಲಿ ಚಾಸಾ-5 ಮತ್ತು 6 ರವರು ಬಂದು ಗಲಾಟೆ ಬಿಡಿಸಿರುತ್ತಾರೆ ಎಂದರೆ ಸರಿ. 1 ನೇ ಆರೋಪಿ ನಿಮ್ಮ ಸುಮ್ಮನೆ ಬಿಡುವುದಿಲ್ಲ ಪ್ರಾಣ ತೆಗೆಯುತ್ತೇವೆ ಎಂದು ಪ್ರಾಣ ಬೆದರಿಕೆ ಹಾಕಿರುತ್ತಾರೆ ಎಂದರೆ ಸರಿ.

**ಪಾಟೀ ಸವಾಲು ಆರೋಪಿ ಪರ ಶ್ರೀ.ಯು.ಎಸ್ ವಕೀಲರಿಂದ.**

ಚಾಸಾ-1 ನನ್ನ ಅಕ್ಕ. ನಾನು ಅಕ್ಕನ ಮಗಳನ್ನು ಮದುವೆಯಾಗಿರುತ್ತೇನೆ ಎಂದರೆ ಸರಿ. ಇದೇ ನ್ಯಾಯಾಲಯದಲ್ಲಿ ನನ್ನ ಹೆಂಡತಿ ವರದಕ್ಷಿಣೆ ಕಿರುಕುಳ ಪ್ರಕರಣದ ದಾಖಲಿಸಿರುತ್ತಾಳೆ ಎಂದರೆ ಸರಿ. ಸಿಸಿ 1108/2020 ಎಂದರೆ ಸರಿ. ನಾನು ದಿನಾಂಕ 12.12.2012 ರಂದು ನಾನು ನನ್ನ ಹೇಳಿಕೆಯನ್ನು ಪೊಲೀಸ್ ಠಾಣೆಯಲ್ಲಿ ನೀಡಿರುತ್ತೇನೆ. ನಾನು ಯಾವುದೇ ಹೇಳಿಕೆ ನೀಡಿಲ್ಲ ಎಂದರೆ ಸರಿಯಲ್ಲ. 1 ಮತ್ತು 2 ನೇ ಆರೋಪಿತರು ಮರಣ ಹೊಂದಿರುತ್ತಾರೆ ಎಂದರೆ ಸರಿ. ಚಾಸಾ-1 ರವರಿಗೆ ಆರೋಪಿತರು ವರದಕ್ಷಿಣೆ ಕಿರುಕುಳ ನೀಡಿಲ್ಲ ಮತ್ತು ಅವಾಚ್ಯ ಶಬ್ದಗಳಿಂದ ಬೈದಿಲ್ಲ ಎಂದರೆ ಸರಿಯಲ್ಲ. ನನ್ನ ಮುಖ್ಯ ವಿಚಾರಣಾ ಪ್ರಮಾಣಪತ್ರದಲ್ಲಿರುವ ಎಲ್ಲಾ ಅಂಶಗಳು ಸುಳ್ಳಿನಿಂದ ಕೂಡಿರುತ್ತವೆ ಎಂದರೆ ಸರಿಯಲ್ಲ.

**ಮರು ವಿಚಾರಣೆ ಇಲ್ಲ.**

(ನನ್ನ ಉಕ್ತಲೇಖನದ ಮೇರೆಗೆ ತೆರದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು.)

ಓ. ಹೇ. ಕೇ. ಸರಿಯಿದೆ.

ಅಪರ ಸಿವಿಲ್ ನ್ಯಾಯಾಧೀಶರು
ಮತ್ತು ಜೆ.ಎಂ.ಎಫ್.ಸಿ., ಹೊಳಲ್ಕೆರೆ.